ಇಂದು ದಿ: **15.07.2026** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

<u>ಪಾಟೀ ಸವಾಲು **1, 2, 6** ರಿಂದ **8** ನೇ ಪ್ರತಿವಾದಿಗಳ ಪರ: ಶ್ರೀ ಜಿ ವಿ ಎಂ., ವಕೀಲರಿಂದ.</u>

ನಾನು 4 ನೇ ತರಗತಿಯವರೆಗೆ ಓದಿರುತ್ತೇನೆ. ವಾದಿಗಳು ನಾವು ಚೆನ್ನಾಗಿ ಇರುತ್ತೇವೆ ಎನ್ನುವುದು ನಿಜ. ಪ್ರತಿವಾದಿಗಳು ಗೊತ್ತು. ವಾದಿಯರ ಕುಟುಂಬ ಬೇರೆ, ಪ್ರತಿವಾದಿಯರ ಕುಟುಂಬ ಬೇರೆ ಎನ್ನುವುದು ನಿಜ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ ಎನ್ನುವುದು ನಿಜ. ದಾವಾ ಆಸ್ತಿ ಸರ್ವೆ ನಂ. 25 ಅದರ ವಿಸ್ತೀರ್ಣ 1 ಎಕರೆ 10 ಗುಂಟೆ ಇರುತ್ತದೆ. ದಾವಾ ಆಸ್ತಿ ಪ್ರತಿವಾದಿಗಳ ಒಟ್ಟು ಕುಟುಂಬದ ಆಸ್ತಿ ಎಂದರೆ ಸಾಕ್ಷಿ ಅವರಿಗೂ ಭಾಗ ಇರುತ್ತದೆ ಎಂದು ಹೇಳುತ್ತಾರೆ. ದಾವಾ ಆಸ್ತಿಯ ಮೇಲೆ 3 ಮತ್ತು 4 ನೇ ಪ್ರತಿವಾದಿಗಳು ಈ ಹಿಂದೆ ದಾವೆಯನ್ನು ಸಲ್ಲಿಸಿದ್ದರು ಎನ್ನುವುದು ನಿಜ. ಸದರಿ ದಾವೆಯಲ್ಲಿ ದಾವಾ ಆಸ್ತಿ ವಾದಿ ಮತ್ತು ಪ್ರತಿವಾದಿಗಳ ಒಟ್ಟು ಕುಟುಂಬದ ಆಸ್ತಿ ಎಂದು ಡಿಕ್ರಿ ಆಗಿರುತ್ತದೆ ಎನ್ನುವುದು ಗೊತ್ತಿರುವುದಿಲ್ಲ. ಅದರ ಮೇಲೆ ಸಲ್ಲಿಸಿದ ಎಫ್.ಡಿ.ಪಿ. ಯಲ್ಲಿ ಅಳತೆ ಮಾಡಲು ಸ್ಥಳಕ್ಕೆ ಬಂದಿದ್ದರು ಎಂದರೆ ಸಾಕ್ಷಿ ಬಂದಿದ್ದರು ಗಲಾಟೆ ಆಗಿದ್ದರಿಂದ ಅಳತೆ ಮಾಡದೆ ಹಾಗೆ ಹೋಗಿರುತ್ತಾರೆ ಎಂದು ಹೇಳುತ್ತಾರೆ. ಪ್ರತಿವಾದಿಗಳು ಗಲಾಟೆ ಮಾಡಿರುತ್ತಾರೆ ಎಂದರೆ ಸಾಕ್ಷಿ ಎಲ್ಲರು ಮಾಡಿರುತ್ತಾರೆ ಎಂದು ಹೇಳುತ್ತಾರೆ. ಸದರಿ ಗಲಾಟೆಯಲ್ಲಿ ವಾದಿಗಳು ಇರಲಿಲ್ಲ ಎಂದರೆ ಸಾಕ್ಷಿ ಅವರು ಇದ್ದರು ಆದರೆ ಗಲಾಟೆ ಮಾಡಿಲ್ಲ ಎಂದು ಹೇಳುತ್ತಾರೆ. ದಾವಾ ಆಸ್ತಿಯ ಮೇಲೆ ಪ್ರತಿವಾದಿಗಳು ಆರ್ ಎ. ನಂ. 54/2016 ನ್ನು ಸಲ್ಲಿಸಿದ್ದರು ಎನ್ನುವುದು ಗೊತ್ತಿರುವುದಿಲ್ಲ. ಸದರಿ ಮೇಲ್ಮನವಿಯಲ್ಲಿ ಪ್ರತಿವಾದಿಗಳ ಪರ ಆದೇಶ ಆಗಿರುತ್ತದೆ ಎನ್ನುವುದು ಗೊತ್ತಿರುವುದಿಲ್ಲ. ದಾವಾ ಆಸ್ತಿಯ ಮೇಲೆ ಸಲ್ಲಿಸಿದ ಆರ್ ಎಸ್ ಎ ನಂ. 993/2021 ಚಾಲ್ತಿಯಲ್ಲಿರುತ್ತದೆ ಎನ್ನುವುದು ಗೊತ್ತಿರುವುದಿಲ್ಲ. ದಾವಾ ಆಸ್ತಿಯಲ್ಲಿ ಪ್ರತಿವಾದಿಗಳು ಊರಿನ ದೇವಸ್ಥಾನಕ್ಕೆ ಮತ್ತು ಶಾಲೆಗೆ ಬಿಟ್ಟುಕೊಟ್ಟಿರುತ್ತಾರೆ ಎಂದರೆ ಸಾಕ್ಷಿ ವಾದಿಗಳ ಜಮೀನಿನಲ್ಲಿ ಇರುತ್ತದೆ ಎಂದು ಹೇಳುತ್ತಾರೆ. ನಾನು ಮತ್ತು ವಾದಿಗಳು ವಿಶ್ವಾಸದಿಂದ ಇರುತ್ತೇವೆ ಎನ್ನುವುದು ನಿಜ. ದಾವಾ ಆಸ್ತಿ ಪ್ರತಿವಾದಿಗಳ ಪಿತ್ರಾರ್ಜಿತ ಆಸ್ತಿ ಎಂದರೆ ಸಾಕ್ಷಿ ಅವರಿಗೂ ಭಾಗ ಇದೆ ಎಂದು ಹೇಳುತ್ತಾರೆ. ಈಗಲೂ ಸಹ ಪ್ರತಿವಾದಿಗಳು ದಾವಾ ಆಸ್ತಿಯನ್ನು ಅನುಭವಿಸಿಕೊಂಡು ಬರುತ್ತಿದ್ದಾರೆ ಎಂದರೆ ಸಾಕ್ಷಿ ಅವರು ಅನುಭವಿಸುತ್ತಿದ್ದಾರೆ, ಇವರು ಅನುಭವಿಸುತ್ತಿದ್ದಾರೆ ಎಂದು ಹೇಳುತ್ತಾರೆ. ದಾಖಲಾತಿಗಳಲ್ಲಿ ವಾದಿಗಳ ಹೆಸರು ಇಲ್ಲ ಎಂದರೆ ಸಾಕ್ಷಿ ಹಳೆ ಪಹಣಿಯಲ್ಲಿ ಇರುತ್ತದೆ ಎಂದು ಹೇಳುತ್ತಾರೆ. ವಾದಿಗಳ ಮಾತನ್ನು ಕೇಳಿ ಪ್ರತಿವಾದಿಗಳಿಗೆ ತೊಂದರೆ ಕೊಡುವ ಸಲುವಾಗಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು **3** ರಿಂದ **5** ನೇ ಪ್ರತಿವಾದಿಗಳ ಪರಃ **3** ರಿಂದ **5** ನೇ ಪ್ರತಿವಾದಿಗಳು ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದ ಕಾರಣ, ಏನು ಇಲ್ಲವೆಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಿದೆ.)

ಓ.ಹೇ.ಕೇ.ಸ.ಇದೆ

(ವೈ.ಕೆ ಬೇನಾಳ್ )
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊಸದುರ್ಗ.